ಸಿಡಬ್ಲೂ- 1

ಸಾಕ್ಷಿಗೆ ದಿನಾಂಕಃ 03.11.2023 ರಂದು ಪ್ರಮಾಣ ವಚನ ನೀಡಲಾಯಿತು.

ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರ ಶ್ರೀ  ಜಿ ಎಂ ವಕೀಲರಿಂದಃ

ಪಿರ್ಯಾದುದಾರರು  ಪಿರ್ಯಾದನ್ನು ಸಲ್ಲಿಸುವಾಗ ಪಿರ್ಯಾದಿನೊಂದಿಗೆ ಸಲ್ಲಿಸಲಾದ ಪ್ರಮಾಣ ಪತ್ರವನ್ನು ತನ್ನ ಮುಖ್ಯ ವಿಚಾರಣೆಯಾಗಿ ಪರಿಗಣಿಸಬೇಕು ಎಂದು ಅರ್ಜಿ ಸಲ್ಲಿಸಿ, ಸದರಿ ಮುಖ್ಯ ಪ್ರಮಾಣ ಪತ್ರವನ್ನಾಗಿ ಪರಿಗಣಿಸಬೇಕೆಂದು ಕೋರಿದ್ದು, ಕೋರಿಕೆಯ ಮೇರೆಗೆ ಸದರಿ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣಾ ಪ್ರಮಾಣ ಪತ್ರವೆಂದು ಪರಿಗಣಿಸಿದ್ದು, ಅದರಲ್ಲಿ ಬರೆದಿರುವ ವಿಚಾರ ಸತ್ಯವಾಗಿದ್ದು, ಅದಕ್ಕೆ ನಾನೇ ಮಾಹಿತಿಯನ್ನು ವಕೀಲರಿಗೆ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿರುವ ಸಹಿ ನನ್ನದಾಗಿರುತ್ತದೆ.

1. **ಆರೋಪಿಯು** ದಿನಾಂಕ **18.07.2019** ರಂದು **ನೀಡಿರುವ ಚೆಕ್ಕನ್ನು** ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಚೆಕ್ಕಿನಲ್ಲಿರುವ ಆರೋಪಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಬ್ಯಾಂಕ್ ನವರು ನೀಡಿರುವ ಹಿಂಬರಹವನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-2 ಎಂದು ಗುರುತಿಸಲಾಯಿತು.

2. **ವಕೀಲರ ಮೂಲಕ ಆರೋಪಿತನಿಗೆ** ನೀಡಿರುವ ಲೀಗಲ್ **ನೋಟೀಸ್‌ನ ಕಛೇರಿಯ ಪ್ರತಿಯನ್ನು** ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಅಂಚೆ ರಶೀದಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಸಿ-4 ಎಂದು ಗುರುತಿಸಲಾಯಿತು. ಅಂಚೆ ಸ್ವೀಕೃತಿ ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸುತಿದ್ದು ಸದರಿ ದಾಖಲೆಯನ್ನು ನಿಪಿ-5 ಎಂದು ಗುರುತಿಸಲಾಯಿತು.

ಆರೋಪಿ ಪರ ವಕೀಲರು ಪಾಟಿ ಸವಾಲಿಗಾಗಿ ಅರ್ಜಿ ಸಲ್ಲಿಸಿರುವುದಿಲ್ಲ, ಆದ್ದರಿಂದ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಗಿದೆ.

ಪಿರ್ಯಾದುದಾರರ ಪರ ವಕೀಲರು ಮುಂದುವರಿದ ವಿಚಾರಣೆ ಇಲ್ಲ ಎಂದು ನುಡಿದಿರುತ್ತಾರೆ.

**ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.**

ಸಾ.ಓ.ಹೇ.ಸ.ಒ.

2 ನೇ ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
**ಪಾಂಡವಪುರ.**